**ಸಾಕ್ಷಿಗೆ ದಿನಾಂಕ 25-02-2026 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು: 2 ನೇ ಎದುರುದಾರರ ಪರ ಶ್ರೀ.ಎಸ್ ಜಿ ಆರ್ ವಕೀಲರಿಂದಃ**

1. ಅಪಘಾತದ ದಿನ ನಾನು ಶಿಡ್ಲಘಟ್ಟದಿಂದ ಚಿಂತಾಮಣಿಗೆ ದ್ವಿಚಕ್ರ ವಾಹನದ ಮೇಲೆ ಒಬ್ಬನೇ ಹೋಗುತ್ತಿದ್ದೇನು. ಸದರಿ ದ್ವಿಚಕ್ರ ವಾಹನ ನನ್ನ ಸ್ನೇಹಿತನಿಗೆ ಸೇರಿತ್ತು. ನನಗೆ ದ್ವಿಚಕ್ರ ವಾಹನ ಚಾಲನೇ ಮಾಡಲು ಡಿಎಲ್ ಇತ್ತು, ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಸದರಿ ಡಿಎಲ್ ನ ದ್ವಿತೀಯ ಪ್ರತಿಯನ್ನು ಹಾಜರುಪಡಿಸಲು ಸಾಧ್ಯವಿಲ್ಲ. ಡಿಎಲ್ ನ್ನು ಚಿಕ್ಕಬಳ್ಳಾಪುರ ಆರ್ ಟಿ ಓ ಕಛೇರಿಯಲ್ಲಿ ಅಪಘಾತವಾದ 2 ವರ್ಷಕ್ಕಿಂತ ಮುಂಚೆ ಮಾಡಿಸಿರುತ್ತೇನೆ. ನನಗೆ ಯಾವುದೇ ರೀತಿಯ ಡಿಎಲ್ ಇಲ್ಲ ಎಂದರೆ ಸರಿಯಲ್ಲ. ಅಪಘಾತದ ದಿನ ನಾನೇ ದ್ವಿಚಕ್ರ ವಾಹನವನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೇ ಮಾಡಿಕೊಂಡು ಹೋಗಿ ಸ್ವತಃ ನಾನೇ ಬಿದ್ದು ಗಾಯಪಡಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

2. ಕಾರು ಅಪಘಾತದಲ್ಲಿ ಭಾಗಿಯಾಗಿಲ್ಲ ಮತ್ತು ನನಗೆ ಡಿಕ್ಕಿಪಡಿಸಿಲ್ಲ ಎಂದರೆ ಸರಿಯಲ್ಲ. ಕಾರಿನ ಮಾಲೀಕರು ಪರಿಚಯಸ್ತರು ಎಂದರೆ ಸರಿಯಲ್ಲ. ನಾನು, ಕಾರಿನ ಮಾಲೀಕರು ಮತ್ತು ಪೊಲೀಸರು ಪರಸ್ಪರ ಶಾಮೀಲಾಗಿ ಕಾರನ್ನು ಸುಳ್ಳಾಗಿ ಸೇರಿಸಿದ್ದೇವೆ ಎಂದರೆ ಸರಿಯಲ್ಲ. ಕಾರನ್ನು ಸುಳ್ಳಾಗಿ ಸೇರಿಸುವ ಸಲುವಾಗಿಯೇ ದೂರನ್ನು ತಡವಾಗಿ ನೀಡಿರುತ್ತೇವೆ ಎಂದರೆ ಸರಿಯಲ್ಲ.

3. ಅಪಘಾತದ ನಂತರ ಶಿಡ್ಲಘಟ್ಟ ದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಪಡದು, ನಂತರ ಚಿಕ್ಕಬಳ್ಳಾಪುರ ಸರ್ಕಾರಿ ಆಸ್ಪತ್ರೆಗೆ ಹೋಗಿದ್ದು ಅಲ್ಲಿ ದಾಖಲು ಮಾಡಿಕೊಳ್ಳದ ಕಾರಣ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಾಗಿರುತ್ತೇನೆ. ಶಿಡ್ಲಘಟ್ಟ ಮತ್ತು ವಿಕ್ಟೋರಿಯಾ ಆಸ್ಪತ್ರೆಗಳಲ್ಲಿ ಅಪಘಾತದ ಹಿನ್ನೆಲೆಯನ್ನು ಹೇಳಿರುತ್ತೇನೆ. ಎರಡು ಆಸ್ಪತ್ರೆಗಳ ಎಂ ಎಲ್ ಸಿ

ದಾಖಲೆಗಳನ್ನು ಹಾಜರುಪಡಿಸಿಸುತ್ತೇನೆ. ಅಪಘಾತದಿಂದಾದ ಸಣ್ಣಪುಟ್ಟ ಗಾಯಗಳು ವಾಸಿಯಾಗಿವೆ ಎಂದರೆ ಸರಿಯಲ್ಲ. ಈಗ ನಾನು ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆ ಮಾಡಿರುತ್ತಾರೆ. ನನಗೆ ಶಸ್ತ್ರಚಿಕಿತ್ಸೆ ಮಾಡಿದ ವೈದ್ಯರ ಹೆಸರು ನೆನಪಿಲ್ಲ.

4. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದ 5ನೇ ಖಂಡಿಕೆಯಲ್ಲಿ ನಮೂದು ಮಾಡಿರುವ ಸಂಗತಿಯ ರುಜುವಾತಿಗಾಗಿ ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ನನ್ನ ವೈದ್ಯಕೀಯಕ್ಕೆ ರೂ.50,000/- ವೆಚ್ಚವಾಗಿಲ್ಲ ಎಂದರೆ ಸರಿಯಲ್ಲ. ಮುಂದುವರೆದ ಚಿಕಿತ್ಸೆಗಾಗಿ ರೂ.50,000/- ಅವಶ್ಯಕತೆ ಇಲ್ಲ ಎಂದರೆ ಸರಿಯಲ್ಲ. ವೈದ್ಯರು ನನಗೆ ಅಂದಾಜು ಪಟ್ಟಿ ನೀಡಿರುವುದಿಲ್ಲ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದ 7ನೇ ಖಂಡಿಕೆಯಲ್ಲಿ ನಮೂದು ಮಾಡಿರುವ ತೊಂದರೆಗಳು ಇರುವುದಿಲ್ಲ ಎಂದರೆ ಸರಿಯಲ್ಲ. ವಿಕ್ಟೋರಿಯಾ ಆಸ್ಪತ್ರೆ ಸರ್ಕಾರಿ ಆಸ್ಪತ್ರೆಯಾಗಿರುವುದರಿಂದ ಅಲ್ಲಿ ಎಲ್ಲಾ ಚಿಕಿತ್ಸೆ ಉಚಿತವಾಗಿ ಪಡೆದಿರುವುದರಿಂದ ವೈದ್ಯಕೀಯ ಬಿಲ್ಲುಗಳು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

5. ನಾನು ಬಡಿಗೆತನ ವೃತ್ತಿಯಿಂದ ಪ್ರತಿತಿಂಗಳು ರೂ.30,000/- ಸಂಪಾದಿಸುತ್ತಿದ್ದೆ ಎಂದು ಮತ್ತು ಯಾರ ಬಳಿ ಕೆಲಸ ಮಾಡುತ್ತಿದ್ದೆ ಎಂದು ತೋರಿಸಲು ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ಅಪಘಾತದ ಪೂರ್ವದಲ್ಲಿ ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯವಿರಲಿಲ್ಲ ಎಂದರೆ ಸರಿಯಲ್ಲ. ನನಗೆ 37 ವರ್ಷ ವಯಸ್ಸಾಗಿರುತ್ತದೆ. ನನ್ನ ಜನ್ಮದಿನಾಂಕ ಹೇಳಲು ಬರುವುದಿಲ್ಲ. ಆಧಾರ್ ಕಾರ್ಡಿನ ಪ್ರಕಾರ ನನಗೆ 39 ವರ್ಷ ವಯಸ್ಸಾಗಿದೆ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ದಾಖಲೆಗಳನ್ನು ಸಲ್ಲಿಸಿ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ 1ನೇ ಎದುರುದಾರರು ಏಕಪಕ್ಷೀಯ. ಈ ಕಾರಣದಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಗಿರುತ್ತದೆ.

ಪಾಟೀ ಸವಾಲುಃ 3ನೇ ಎದುರುದಾರರು ಮತ್ತು ಅವರ ಪರ ವಕೀಲರು ಗೈರುಹಾಜರು. ಈ ಕಾರಣದಿಂದ ಪಾಟೀಸವಾಲು ಇಲ್ಲ ತೆಗೆದುಕೊಳ್ಳಲಾಗಿರುತ್ತದೆ.

ಮರು ವಿಚಾರಣೆಃ ಇಲ್ಲ.

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**